# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 25-03-2021 ಪ್ರಶ್ನೆ ಸಂಖ್ಯೆ : 1838 (2174)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 25-03-2021

ಉತ್ತರಿಸುವ ಸಚಿವರು: ಮಾನ್ಯ ಮುಖ್ಯಮಂತ್ರಿಗಳು

ವಿಷಯ : ಕರ್ನಾಟಕದ ಪಾವಗಡದಲ್ಲಿ ಸ್ಥಾಪಿಸಿರುವ ಸೋಲಾರ್ ಪಾರ್ಕ್ ಬಗ್ಗೆ

(ಅ) ಕರ್ನಾಟಕದ ಪಾವಗಡದಲ್ಲಿ ಸ್ಥಾಪಿಸಿರುವ ಸೋಲಾರ್ ಪಾರ್ಕ್‌ನ ಅಭಿವೃದ್ಧಿ ಮತ್ತು ಕಾಮಗಾರಿ ಮಾಡಿರುವ ವೆಚ್ಚವೆಷ್ಟು ;

(ಆ) ಪಾವಗಡದ ಸೋಲಾರ್ ಪಾರ್ಕ್‌ನಲ್ಲಿ ಸ್ಥಾಪಿಸಿರುವ ಸೋಲಾರ್ ವಿದ್ಯುತ್‌ನ ಸಾಮರ್ಥ್ಯವೆಷ್ಟು ;

(ಇ) ಸದರಿ ಪಾರ್ಕ್‌ನಲ್ಲಿ ಸ್ಥಾಪಿಸಲಾಗಿರುವ ಸೋಲಾರ್ ವಿದ್ಯುತ್ ಉತ್ಪಾದನಾ ಘಟಕವನ್ನು ಯಾವ ಯಾವ ಸಂಸ್ಥೆಗಳ ಮುಖಾಂತರ ಸ್ಥಾಪಿಸಲಾಗಿದೆ ; (ಅವುಗಳ ಸಾಮರ್ಥ್ಯವನ್ನು ಒದಗಿಸುವುದು)

(ಈ) ಈ ಸೋಲಾರ್ ಪಾರ್ಕ್‌ನಲ್ಲಿ ಉತ್ಪಾದಿಸಲ್ಪಡುವ ವಿದ್ಯುತ್‌ನ್ನು ಯಾವ ದರದಲ್ಲಿ ಖರೀದಿ ಮಾಡಲಾಗುತ್ತಿದೆ ಮತ್ತು ಈ ವಿದ್ಯುತ್ ಉತ್ಪಾದಕ ಸಂಸ್ಥೆಗಳೊಂದಿಗೆ ಎಷ್ಟು ವರ್ಷಕ್ಕೆ ಕರಾರು ಮಾಡಿಕೊಳ್ಳಲಾಗಿದೆ ;

(ಉ) ಈ ಸೋಲಾರ್ ಪಾರ್ಕ್‌ನ್ನು ಅಭಿವೃದ್ಧಿಪಡಿಸಿದ ನಂತರ ರಾಜ್ಯದ ರೈತರಿಗೆ ವಿದ್ಯುತ್ ಸರಬರಾಜಿನಲ್ಲಿ ಆಗಿರುವ ಅನುಕೂಲಗಳೇನು ಮತ್ತು ಎಸ್ಕಾಂಗಳ ಮೇಲೆ ಆಗಿರುವ ಪರಿಣಾಮಗಳೇನು ?